ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 23–08–2021

# ಪತ್ರಿಕಾ ಪ್ರಕಟಣೆ

## PRESS RELEASE

### ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೆ ತರುವಲ್ಲಿ ಕರ್ನಾಟಕವೇ ಮೊದಲ ರಾಜ್ಯ

– ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ.

ಬೆಂಗಳೂರು ಆಗಸ್ಟ್ 23 (ಕರ್ನಾಟಕ ವಾರ್ತೆ) :

ನಮ್ಮ ವಿದ್ಯಾರ್ಥಿಗಳು ವಿಶ್ವಮಟ್ಟದಲ್ಲಿ ಸ್ಪರ್ಧಿಸುವ ಶಕ್ತಿ, ಸಾಮರ್ಥ್ಯ ನೀಡುವ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸುತ್ತಿರುವ ಮೊದಲ ರಾಜ್ಯ ಕರ್ನಾಟಕವಾಗಿದ್ದು, ಇಡೀ ದೇಶದಲ್ಲಿ ಅಮೂಲ್ಯ ಬದಲಾವಣೆ ತರುವ ಕೆಲಸ ಮಾಡಿದ್ದೇವೆ ಎಂದು ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ ಆಯೋಜಿಸಿದ್ದ "ರಾಷ್ಟ್ರೀಯ ಶಿಕ್ಷಣ ನೀತಿ 2020"ರ ಅನುಷ್ಠಾನ, ಉನ್ನತ ಶಿಕ್ಷಣ ಪ್ರವೇಶಾತಿ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿಯ ಸಹಾಯವಾಣಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು. .

ನೂತನ ಶಿಕ್ಷಣ ನೀತಿಯಿಂದ ಶಿಕ್ಷಣ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆಯಾಗಿದ್ದು, ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಹಾಗೂ ತನಗೆ ಆಸಕ್ತಿಯಿರುವ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳಲು ನೆರವಾಗುವ ಜೊತೆಗೆ ವಿದ್ಯಾರ್ಥಿಗಳ ಸರ್ವಾಂಗೀಣ ಸ್ವತಂತ್ರ ಮತ್ತು ಕ್ರಿಯಾಶೀಲತೆಗೆ ನೆರವಾಗಲಿದೆ ಎಂದರು.

ವಿದ್ಯಾರ್ಥಿಗಳ ಪಾಲಿಗೆ ಇಂದು ಸ್ವತಂತ್ರದ ದಿನ. ಕೋವಿಡ್ – 19 ಸಾಂಕ್ರಾಮಿಕ ರೋಗದಿಂದಾಗಿ ಕಳೆದ ಒಂದೂವರೆ ವರ್ಷದಿಂದ ಎಲ್ಲಾ ಶಾಲಾ ಕಾಲೇಜುಗಳನ್ನು ಮುಚ್ಚಲಾಗಿತ್ತು. ಇಂದು ಇದಕ್ಕೆ ಮುಕ್ತಿ ಸಿಕ್ಕಿದ್ದು, ಇಂದಿನಿಂದ ಶಾಲಾ ಕಾಲೇಜುಗಳನ್ನು ಆರಂಭಿಸಲಾಗಿದೆ. ಹಾಗೂ ಇಂದೇ ನೂತನ ಶಿಕ್ಷಣ ನೀತಿಯಡಿ ದಾಖಲಾತಿಗೂ ಚಾಲನೆ ನೀಡಿರುವುದರಿಂದ ಈ ದಿನ ವಿದ್ಯಾರ್ಥಿಗಳ ಪಾಲಿಗೆ ಸ್ವತಂತ್ರ ದಿನಾಚರಣೆ ಎಂಬುದು ನನ್ನ ಭಾವನೆ. ಇಂದು ಅನುಷ್ಠಾನಗೊಳಿಸಿರುವ ಶಿಕ್ಷಣ ನೀತಿಯು ಯಶಸ್ವಿಯಾದರೆ, ಸೆಪ್ಟೆಂಬರ್ 5 ರಂದು ಆಚರಿಸುವ ಶಿಕ್ಷಕರ ದಿನಾಚರಣೆಯಂತೆ ಆಗಸ್ಟ್ 23 ನ್ನು ಶಿಕ್ಷಣ ದಿನಾಚರಣೆಯನ್ನಾಗಿ ಆಚರಿಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಪ್ರಧಾನಮಂತ್ರಿಗಳ ದೂರದೃಷ್ಟಿಯ ಫಲವಾಗಿ ಹೊಸ ಶಿಕ್ಷಣ ನೀತಿ ಜಾರಿಯಾಗಿದ್ದು, ಶಿಕ್ಷಣ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆಯಾಗುವ ಜೊತೆಗೆ, ವಿದ್ಯಾರ್ಥಿಗಳ ಜ್ಞಾನ, ಸೃಜನಶೀಲತೆ, ಅಭಿವ್ಯಕ್ತಿಗೆ ಕಾರಣವಾಗುವ ಶಿಕ್ಷಣ ನೀತಿ ಇದಾಗಿದ್ದು, ಇದರಿಂದ ದೇಶದಲ್ಲಿ ಒಳ್ಳೆಯ ಬದಲಾವಣೆಯಾಗಲಿದೆ, ಇದನ್ನು ಯಶಸ್ವಿಯಾಗಿ ಜಾರಿ ಮಾಡುವ ಹೊಣೆ ನಮ್ಮದು ಎಂದರು.

ಶಿಕ್ಷಣ ನೀತಿ ಯಶಸ್ವಿಯಾಗಬೇಕಾದರೆ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ ಮೀರುವಂತ ತಂತ್ರಾಂಶ ಜ್ಞಾನವನ್ನು ನೀಡಬೇಕು. ಪ್ರತಿಯೊಂದು ಗ್ರಾಮದ ಶಾಲಾ–ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಿಗೆ ಈ ಯೋಜನೆ ತಲುಪಬೇಕು. ಕಾನ್ವೆಂಟ್ ಶಾಲೆಯಲ್ಲಿ ಕಲಿತ ಮಕ್ಕಳು ಮಾತ್ರ ವಿದ್ಯಾವಂತರಲ್ಲ. ಸರ್ಕಾರಿ ಶಾಲೆಯಲ್ಲಿ ಕಲಿತ ವಿದ್ಯಾರ್ಥಿಗಳು ಉನ್ನತ ಮಟ್ಟದಲ್ಲಿ ಯಶಸ್ಸು ಸಾಧಿಸಿ, ವಿಶ್ವ ಮಟ್ಟದಲ್ಲಿ ಉನ್ನತ ಹುದ್ದೆಯನ್ನು ಅಲಂಕರಿಸಿದ್ದಾರೆ, ಇದು ಹೆಮ್ಮೆಯ ವಿಷಯ.

ವಿದ್ಯಾರ್ಥಿಗಳಿಗೆ 8ನೇ ತರಗತಿಯಿಂದಲೇ ಆತ್ಮವಿಶ್ವಾಸ ಬೆಳೆಸುವ ಜೊತೆಗೆ, ಕಲಿಕೆಯಲ್ಲಿ ಇರುವ ಅವಕಾಶಗಳ ಕುರಿತು ಅರಿವು ಮೂಡಿಸಬೇಕು. ಆರೋಗ್ಯ ಮುಖ್ಯವಾಗಿದ್ದು, ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು. ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನಕ್ಕೆ ಕೊರತೆಯಾಗದಂತೆ ಸರ್ಕಾರವು ಕೋವಿಡ್‌ನ ಆರ್ಥಿಕ ಸಂಕಷ್ಟದಲ್ಲೂ ಹೆಚ್ಚಿನ ಆದ್ಯತೆ ನೀಡಿದ್ದು, ಮುಂದೆಯು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದರು.

ಶಿಕ್ಷಣ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಅವರು ದೆಹಲಿಯಿಂದ ಆನ್‌ಲೈನ್‌ನಲ್ಲಿ ಮಾತನಾಡಿದ ಅವರು ದೇಶವನ್ನು ಹೊಸ ದಿಕ್ಕಿನತ್ತ ಕೊಂಡೊಯ್ಯುವ ನೂತನ ಶಿಕ್ಷಣ ನೀತಿಯನ್ನು ಕರ್ನಾಟಕ ರಾಜ್ಯವು ಇಡೀ ದೇಶದಲ್ಲೇ ಅತ್ಯಂತ ವೇಗವಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ ಉದ್ಯಮ ಶೀಲತೆ ಸಚಿವ ಡಾ: ಸಿ.ಎನ್. ಅಶ್ವಥ್ ನಾರಾಯಣ್ ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬ ನಾಗರೀಕರಿಗೂ ತಮ್ಮ ಭವಿಷ್ಯವನ್ನು ಕಲ್ಪಿಸಿಕೊಳ್ಳಲು ಗುಣಮಟ್ಟದ ಶಿಕ್ಷಣದ ಅಗತ್ಯವಿದ್ದು, ಇದರಲ್ಲಿ ಸಾಕಷ್ಟು ಬದಲಾವಣೆಯನ್ನು ತರಬೇಕು ಎನ್ನುವ ಉದ್ದೇಶದಿಂದ ಪ್ರಧಾನ ಮಂತ್ರಿಗಳು ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಹಮ್ಮಿಕೊಂಡಿದ್ದಾರೆ ಎಂದು ತಿಳಿಸಿದರು.

ಸಾಮಾಜಿಕವಾಗಿ, ಆರ್ಥಿಕವಾಗಿ ಸಮಾಜವನ್ನು ಸದೃಢವನ್ನಾಗಿಸಲು ಶಿಕ್ಷಣ ಮತ್ತು ಕೌಶಲ್ಯತೆಯಿಂದ ಮಾತ್ರ ಸಾಧ್ಯ. ಇದಕ್ಕೆ ಎಷ್ಟು ಆದ್ಯತೆ ನೀಡಿದರೂ ಸಾಕಾಗುವುದಿಲ್ಲ. 34 ವರ್ಷಗಳ ನಂತರ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲಾಗಿದೆ. ವಿಶ್ವಮಟ್ಟದಲ್ಲಿ ಸ್ಥಾನ ಪಡೆಯಲು ಹಾಗೂ ಆರ್ಥಿಕವಾಗಿ ಶಕ್ತಿ ಪಡೆಯಲು ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕೆಂದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವ ಬಿ.ಸಿ.ನಾಗೇಶ್ ಮಾತನಾಡಿ, ಶಿಕ್ಷಣದಲ್ಲಿ ಆಮೂಲಾಗ್ರ ಬದಲಾವಣೆ ತರಲು ಪ್ರಧಾನ ಮಂತ್ರಿಗಳು ಈ ಅಭಿಯಾನವನ್ನು ಪ್ರಾರಂಭಿಸಿದ್ದು, ಮಕ್ಕಳಿಗೆ ಅರ್ಥವಾಗುವ ಶಿಕ್ಷಣ ನೀಡುವಂತಾಗಬೇಕೆಂದರು.

ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಹಾಗೂ ಇಸ್ರೋದ ಮಾಜಿ ಅಧ್ಯಕ್ಷರಾದ ಡಾ: ಕೆ. ಕಸ್ತೂರಿ ರಂಗನ್ ಮಾತನಾಡಿ, ರಾಷ್ಟ್ರೀಯ ಶಿಕ್ಷಣ ನೀತಿ ಕುರಿತು ಯಾವುದೇ ಆತಂಕ ಬೇಡ ಎಂದರು.

ಇದೇ ಸಂದರ್ಭದಲ್ಲಿ ಶಿಕ್ಷಣ ನೀತಿ ರೂವಾರಿಗಳಾದ ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಅಧ್ಯಕ್ಷರು ಹಾಗೂ ಇಸ್ರೋದ ಮಾಜಿ ಅಧ್ಯಕ್ಷರಾದ ಡಾ.ಕೆ. ಕಸ್ತೂರಿ ರಂಗನ್, ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಸದಸ್ಯರು ಹಾಗೂ ಕರ್ನಾಟಕ ಜ್ಞಾನ ಆಯೋಗದ ಸದಸ್ಯ ಕಾರ್ಯದರ್ಶಿ ಡಾ.ಎಂ.ಕೆ. ಶ್ರೀಧರ್, ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿ ಸದಸ್ಯರು ಹಾಗೂ ಆಂದ್ರ ಪ್ರದೇಶದ ವಿಜಯನಗರಂನ ಕೇಂದ್ರ ಟ್ರೈಬಲ್ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಡಾ.ಟಿ.ವಿ. ಕಟ್ಟೀಮನಿ, ಡಾ.ಅನುರಾಗ ಬೇಹಾರ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಕುಮಾರ್ ನಾಯಕ್, ಉನ್ನತ ಶಿಕ್ಷಣ ಪರಿಷತ್‌ನ ಕಾರ್ಯನಿರ್ವಾಹಕ ನಿರ್ದೇಶಕ ಪ್ರೊ. ಗೋಪಾಲ್ ಕೃಷ್ಣ ಜೋಷಿ, ವಿವಿಧ ವಿಶ್ವವಿದ್ಯಾನಿಲಯದ ಕುಲಪತಿಗಳು, ಪ್ರಾಂಶುಪಾಲರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಜೂನ್ 2021ರ ಅಂತ್ಯಕ್ಕೆ ರೂ 1387.55 ಕೋಟಿ ರಾಜಧನ ಸಂಗ್ರಹ

– ಸಚಿವ ಹಾಲಪ್ಪ ಬಸಪ್ಪ ಆಚಾರ್

ಬೆಂಗಳೂರು ಆಗಸ್ಟ್ 23 (ಕರ್ನಾಟಕ ವಾರ್ತೆ) :

ಸರ್ಕಾರದಿಂದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ 2021–22ನೇ ಸಾಲಿನಲ್ಲಿ ರೂ 4 ಸಾವಿರ ಕೋಟಿ ರಾಜಧನ ಸಂಗ್ರಹಣೆ ಗುರಿ ನಿಗಧಿಪಡಿಸಲಾಗಿದ್ದು, ಜೂನ್ 2021ರ ಅಂತ್ಯದ ವರೆಗೆ ರೂ. 1387.55 ಕೋಟಿ ಸಂಗ್ರಹವಾಗಿರುತ್ತದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವ ಹಾಲಪ್ಪ ಬಸಪ್ಪ ಆಚಾರ್ ಅವರು ತಿಳಿಸಿದರು.

ಸಚಿವರಾದ ನಂತರ ಮೊದಲ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ರಾಜ್ಯದಲ್ಲಿ 45 ದಶಲಕ್ಷ ಮೆಟ್ರಿಕ್ ಟನ್ ಮರಳು ಬೇಡಿಕೆ ಇದ್ದು, ಪ್ರಸ್ತುತ 37 ದಶಲಕ್ಷ ಮೆಟ್ರಿಕ್ ಟನ್ ಪೂರೈಕೆ ಆಗುತ್ತಿದೆ ಹಾಗೂ 8 ದಶಲಕ್ಷ ಟನ್ ಮರುಳು ಕೊರತೆಯಿದ್ದು, ಸರ್ವರಿಗೂ ಮರಳು ಸುಗಮವಾಗಿ ದೊರೆಯುವ ಉದ್ದೇಶದಿಂದ ಹೊಸ ಮರಳು ನೀತಿ 2020 ಜಾರಿಗೆ ತರುವ ಕುರಿತು ಈಗಾಗಲೇ ತಜ್ಞರ ಸಚಿವ ಸಂಪುಟ ಉಪಸಮಿತಿ ರಚಿಸಲಾಗಿದ್ದು ಹಲವಾರು ಸಭೆಗಳನ್ನು ನಡೆಸಲಾಗಿದೆ. ಪ್ರಸ್ತುತ ಸಮಿತಿಯು ತೆಲಂಗಾಣ ಮಾದರಿಯಲ್ಲಿ ಮರಳು ಗಣಿಗಾರಿಕೆಯನ್ನು ಜಾರಿಗೆ ತರಲು ಶಿಪಾರಸ್ಸು ಮಾಡಿರುತ್ತದೆ.

ಜಿಲ್ಲಾ ಖನಿಜ ಪ್ರತಿಷ್ಠಾನ ನಿಧಿ ಟ್ರಸ್ಟ್‌ಗೆ ಜೂನ್ 2021ರ ಅಂತ್ಯದ ವರೆಗೆ ರೂ. 2712.46 ಕೋಟಿ ಸಂಗ್ರಹವಾಗಿದ್ದು, ಗಣಿಬಾಧಿತ ಪ್ರದೇಶಗಳ ಅಭಿವೃದ್ಧಿಗಾಗಿ ಈ ವರೆಗೆ ರೂ 3645.85 ಕೋಟಿ ಮೊತ್ತಕ್ಕೆ ಕ್ರಿಯಾ ಯೋಜನೆಯನ್ನು ತಯಾರಿಸಿ 7826 ಕಾಮಗಾರಿಗಳನ್ನು ಕೈಗೊಂಡು 2130 ಕ್ರಿಯಾ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸ ರೂ. 837.40 ಕೋಟಿ ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಆದೇಶದಂತೆ ಬಿ.ಎಂ.ಎಫ್ ಅಡಿಯಲ್ಲಿ ರೂ. 384.49 ಕೋಟಿ ಮೊತ್ತವನ್ನು ಕೋವಿಡ್ ನಿಯಂತ್ರಣಕ್ಕಾಗಿ ಮೀಸಲಿರಿಸಲಾಗಿರುತ್ತದೆ ಹಾಗೂ ಜೂನ್ 2021ರ ಅಂತ್ಯದ ವರೆಗೆ ರೂ. 157.36 ಕೋಟಿ ಮೊತ್ತವನ್ನು ವೆಚ್ಚ ಮಾಡಲಾಗಿರುತ್ತದೆ.

ಇಲಾಖೆಯ ಅಡಿಯಲ್ಲಿ ಬರುವ ಹಟ್ಟಿ ಚಿನ್ನದಗಣಿ ಹಾಗೂ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ ಸಂಸ್ಥೆಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಪ್ರಸ್ತುತ 7 ಚಿನ್ನದ ಗಣಿ ಗುತ್ತಿಗೆಗಳನ್ನು ಮತ್ತು 2 ತಾಮ್ರದ ಗಣಿ ಗುತ್ತಿಗೆಗಳನ್ನು ಹಟ್ಟಿ ಚಿನ್ನದ ಗಣಿ ನಿಯಮಿತದಿಂದ ನಿರ್ವಹಿಸಲಾಗುತ್ತಿದೆ.

ರಾಜ್ಯದಲ್ಲಿನ ಕಲ್ಲುಗಣಿಗಾರಿಕೆ ಹಾಗೂ ಶಿವಮೊಗ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ನಡೆದ ಸ್ಫೋಟಗಳ ಘಟನೆ ಕುರಿತು ತಾವು ಸಂಪೂರ್ಣ ಮಾಹಿತಿ ಪಡೆದು ಮಾತನಾಡುವುದಾಗಿ ತಿಳಿಸಿದರು.

ಮಕ್ಕಳ ಉತ್ತಮ ಭವಿಷ್ಯವೇ ಭಾರತದ ಭವಿಷ್ಯ ಎಂಬ ದೂರದೃಷ್ಟಿಯ ಹಿನ್ನೆಲೆಯಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಮಕ್ಕಳ ಸರ್ವತೋಮುಖ ಬೆಳವಣಿಗೆ, ಲಿಂಗ ಪ್ರಮಾಣವನ್ನು ಏರಿಸುವುದು, ಶಿಶು ಮರಣ ಪ್ರಮಾಣ ಹಾಗೂ ತಾಯಂದಿರ ಮರಣ ಪ್ರಮಾಣವನ್ನು ಇಳಿಸುವುದು. ಆರೋಗ್ಯ, ಪೌಷ್ಠಿಕ, ಹಾಗೂ ಶಾಲಾಪೂರ್ವ ಶಿಕ್ಷಣ ನೀಡುವುದು, ಮಕ್ಕಳ ಹಕ್ಕುಗಳನ್ನು ರಕ್ಷಿಸುವ, ಮಕ್ಕಳ ವಿರುದ್ಧ ದೌರ್ಜನ್ಯವನ್ನು ಹೋಗಲಾಡಿಸಿ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಕಲ್ಪಿಸುವ ಉದ್ದೇಶ ಇಟ್ಟುಕೊಂಡು ಯೋಜನೆಗಳನ್ನು, ನೀತಿಗಳನ್ನು ಹಾಗೂ ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ. ಮಹಿಳೆಯರ ಮತ್ತು ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ದೃಷ್ಟಿಯಿಂದ ಅತೀ ಮಹತ್ತರವಾದ ಯೋಜನೆಗಳಲ್ಲೊಂದಾಗಿದೆ.

ರಾಜ್ಯದಲ್ಲಿನ ಒಟ್ಟು ತೀವ್ರ ಮತ್ತು ಸಾಧಾರಣ ಅಪೌಷ್ಠಿಕ ಮಕ್ಕಳ ಸಂಖ್ಯೆಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. ಈ ಅಪೌಷ್ಠಿಕತೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಿದೆ. ಕ್ಷೀರ ಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲು ನೀಡಲಾಗುತ್ತಿದೆ (15ಗ್ರಾಂ ಹಾಲಿನಪುಡಿ , 10 ಗ್ರಾಂ ಸಕ್ಕರೆ).

06 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಹೆಚ್ಚುವರಿಯಾಗಿ ವಾರದಲ್ಲಿ 3 ದಿನ ಮೊಟ್ಟೆ, 3-6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ. ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ. 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಗುಲ್ಬರ್ಗಾ, ರಾಯಚೂರು, ಕೊಪ್ಪಳ ಹಾಗೂ ಯಾದಗಿರಿ ಜಿಲ್ಲೆಗಳ 6 ತಿಂಗಳಿಂದ - 3 ವರ್ಷದ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3-6 ವರ್ಷದ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ನೀಡಲಾಗುತ್ತಿದೆ, ಮೊಟ್ಟೆ ತಿನ್ನದ ಮಕ್ಕಳಿಗೆ ವಾರದ 6 ದಿನ ಹಾಲು ನೀಡಲಾಗುತ್ತಿದೆ. "ಸೃಷ್ಠಿ" ಯೋಜನೆಯಡಿ 3 ರಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ. ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರದ ಫಲಾನುಭವಿಗಳಿಗೆ ಪ್ರತಿ ಮಾಹೆ ಸುಮಾರು 4.5 ಕೋಟಿ ಮೊಟ್ಟೆಗಳನ್ನು ವಿತರಿಸಲಾಗುತ್ತಿದೆ. ಪ್ರಸ್ತುತ ದಿನಾಂಕ: 03/08/2021 ರಂದು ಸರ್ಕಾರದಿಂದ ಆದೇಶ ಹೊರಡಿಸಿ ಫಲಾನುಭವಿಗಳಿಗೆ ನೀಡುವ ಮೊಟ್ಟೆಯನ್ನು ತಾಲ್ಲೂಕು ಮಟ್ಟದಲ್ಲಿ ಟೆಂಡರ್ ಕರೆದು ಖರೀದಿಸಲು ಆಡಳಿತಾತ್ಮಕ ಅನುಮೋದನೆ ದೊರೆತಿರುತ್ತದೆ. (ಅನುಬಂಧಂ-2A & 2B)

ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಮಧ್ಯಾಹ್ನದ ಬಿಸಿಯೂಟವನ್ನು ಅಂಗನವಾಡಿ ಕೇಂದ್ರದಲ್ಲಿಯೇ ನೀಡುವ "ಮಾತೃಪೂರ್ಣ" ಯೋಜನೆಯನ್ನು 2017 ಅಕ್ಟೋಬರ್ 2ನೇ ತಾರೀಖಿನಿಂದ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುತ್ತಿದೆ. ಈ ಪೂರ್ಣ ಊಟದಲ್ಲಿ ಅನ್ನ, ಸಾಂಬಾರ್, ಪಲ್ಯದ ಜೊತೆಗೆ ಬೇಯಿಸಿದ ಮೊಟ್ಟೆ, 200 ಮಿ.ಲೀ ಹಾಲು ಮತ್ತು ಚಿಕ್ಕಿಯನ್ನು ತಿಂಗಳಿಗೆ ಕನಿಷ್ಠ 25 ದಿನಗಳು ನೀಡಲಾಗುತ್ತಿದೆ. ಪ್ರತಿ ಫಲಾನುಭವಿಗೆ ಪ್ರತಿ ದಿನಕ್ಕೆ ರೂ.21/-ರ (ರೂ.9.50/- ಸೇರಿದಂತೆ) ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರೆ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರು ತೂಕವನ್ನು ಪರಿಶೀಲಿಸಲಾಗುತ್ತಿದೆ. ಕೋವಿಡ್- 19 ರ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳನ್ನು ಮುಚ್ಚಿರುವುದರಿಂದ ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರಿಗೆ ಮನೆಬಾಗಿಲಿಗೆ ಆಹಾರ ಧಾನ್ಯವನ್ನು ನೀಡಲಾಗುತ್ತಿದೆ.

- ರಾಜ್ಯದಲ್ಲಿ **59,379 ಅಂಗನವಾಡಿ ಕಾರ್ಯಕರ್ತೆಯರು, ಶೇ.90.06 ರಷ್ಟು, 52,609 ಅಂಗನವಾಡಿ ಸಹಾಯಕಿಯರು, ಶೇ.85.91 ರಷ್ಟು** ಕೋವಿಡ್ ವ್ಯಾಕ್ಸಿನೇಷನ್ ಪಡೆದಿರುತ್ತಾರೆ.

- ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿ **ಒಟ್ಟು 122645 ಗರ್ಭಿಣಿ / ಬಾಣಂತಿಯರು** ದಾಖಲಾಗಿರುತ್ತಾರೆ. (ಏಪ್ರಿಲ್ -2021 ರಿಂದ ಜುಲೈ- 2021 ರವರೆಗೆ)

**ಭಾಗ್ಯಲಕ್ಷ್ಮಿ- ಸುಕನ್ಯಾ ಸಮೃದ್ಧಿ ಯೋಜನೆ:-**

- ಈ ಯೋಜನೆಯಡಿ ಒಟ್ಟು 1,56,000 ಫಲಾನುಭವಿಗಳಿದ್ದು, ಇವರಿಗೆ 15 ವರ್ಷಗಳವರೆಗೆ ಪ್ರತಿ ವರ್ಷ ತಲಾ ರೂ.3,000/-ಗಳನ್ನು ಅಂಚೆ ಕಛೇರಿಯಲ್ಲಿ ಠೇವಣಿ ಇರಿಸಲಾಗುತ್ತಿದೆ. ಫಲಾನುಭವಿಗೆ 21 ವರ್ಷ ತುಂಬಿದಾಗ ರೂ.1,20,000/- ಪರಿಪಕ್ವತಾ ಮೊತ್ತ ನೀಡಲಾಗುವುದು.

**ಅಂಗನವಾಡಿ ಕಟ್ಟಡಗಳ ಕುರಿತು ಮಾಹಿತಿ:**

- ರಾಜ್ಯದಲ್ಲಿ **65,911** ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ (ಅನುಬಂಧ-4).
- ಮೂಲಸೌಕರ್ಯದ ವಿವರಗಳನ್ನು ಅನುಬಂಧ-5ರಲ್ಲಿ ಲಗತ್ತಿಸಿದೆ.
- ಅಂಗನವಾಡಿ ಕಟ್ಟಡಗಳನ್ನು ನರೇಗಾ ಒಗ್ಗೂಡಿಸುವಿಕೆ, ವಿಶೇಷ ಅಭಿವೃದ್ಧಿ ಯೋಜನೆ, ನಬಾರ್ಡ್ ನ RIDF ವಿವಿಧ ಟ್ರಂಚ್ ಗಳಡಿ ಮತ್ತು ಇಲಾಖಾ ಅನುದಾನದಿಂದ ನಿರ್ಮಾಣ ಮಾಡಲಾಗುತ್ತಿದೆ.
- 65911 ಅಂಗನವಾಡಿ ಕೇಂದ್ರಗಳ ಪೈಕಿ 53901 ಗ್ರಾಮೀಣ ಮತ್ತು 12010 ನಗರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

**75ನೇ ಸ್ವಾತಂತ್ರ್ಯೋತ್ಸವದ ಘೋಷಣೆಗಳು :**

ಭಾರತ ಸ್ವಾತಂತ್ರ್ಯದ 75 ನೇ ಮಹೋತ್ಸವದ ಸವಿನೆನಪಿಗಾಗಿ ಸನ್ಮಾನ್ಯ ಮುಖ್ಯ ಮಂತ್ರಿಗಳು ಹಲವು ಮಹತ್ತರ ಕಾರ್ಯಕ್ರಮಗಳನ್ನು ಘೋಷಿಸಿರುತ್ತಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಘೋಷಿಸಿರುವ **"ಅಮೃತ ಅಂಗನವಾಡಿ ಕೇಂದ್ರಗಳು"** ಕಾರ್ಯಕ್ರಮವು ಅವುಗಳಲ್ಲೊಂದಾಗಿದೆ. ಕಾರ್ಯಕ್ರಮದಡಿ 750 ಅಂಗನವಾಡಿ ಕೇಂದ್ರಗಳು ಅಂದರೆ ಗ್ರಾಮೀಣ 375 ಮತ್ತು ನಗರ ಪ್ರದೇಶದಲ್ಲಿ 375 ಅಂಗನವಾಡಿ ಕೇಂದ್ರಗಳನ್ನು ಆಯ್ಕೆ ಮಾಡಿಕೊಂಡು ಆ ಅಂಗನವಾಡಿ ಕೇಂದ್ರಗಳ ಮೂಲಭೂತ ಸೌಕರ್ಯಗಳಾದ ಶೌಚಾಲಯ, ವಿದ್ಯುತ್ ಸಂಪರ್ಕ, ಫ್ಯಾನ್ ಸಂಪರ್ಕ, ಮಕ್ಕಳಿಗೆ ಕೈತೊಳೆಯಲು ವಾಷ್‌ಬೇಸಿನ್ ಮತ್ತು ಬಾಲಸ್ನೇಹಿ ಚಿತ್ರಗಳನ್ನು ಒಳಗೊಂಡಿರುತ್ತದೆ.

ರಾಜ್ಯದಲ್ಲಿ 2000-01ನೇ ಸಾಲಿನಿಂದ ಸ್ತ್ರೀಶಕ್ತಿ ಯೋಜನೆ ಜಾರಿಗೊಂಡು ಪ್ರಸ್ತುತ 1,65,960 ಸ್ತ್ರೀಶಕ್ತಿ ಗುಂಪುಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸ್ತುತ 75ನೇ ಸ್ವಾಂತಂತ್ರ್ಯೋತ್ಸವದ ಸವಿನೆನಪಿಗಾಗಿ "ಅಮೃತ ಸ್ವಸಹಾಯ ಕಿರು ಉದ್ದಿಮೆಗಳು" ರಾಜ್ಯದಲ್ಲಿ ಆಯ್ದ 7500 ಸ್ವಸಹಾಯ ಗುಂಪುಗಳನ್ನು ಯಶಸ್ವಿ ಕಿರು ಉದ್ದಿಮೆಗಳನ್ನಾಗಿ ಸ್ಥಾಪಿಸುವ ಸದುದ್ದೇಶದಿಂದ ತಲಾ ರೂ.1.00 ಲಕ್ಷದಂತೆ ಒಟ್ಟು ರೂ.75.00 ಕೋಟಿಗಳ ಅನುದಾನವನ್ನುಮೀಸಲಿಡಲಾಗಿದೆ. ಪ್ರತೀ ಜಿಲ್ಲೆಯಿಂದ ಆದಾಯೋತ್ಪನ್ನ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ 250 ಗುಂಪುಗಳನ್ನು

ಜಿಲ್ಲೆಯಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಿಕೊಂಡು ಆ ಗುಂಪುಗಳನ್ನು ಯಶಸ್ವಿ ಕಿರು ಉದ್ದಿಮೆಗಳನ್ನಾಗಿ ಸ್ಥಾಪಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ.

**ಕೋವಿಡ್ 3ನೇ ಅಲೆ ಹಿನ್ನೆಲೆಯಲ್ಲಿ ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳು**

- ಕೋವಿಡ್ 3ನೇ ಅಲೆ ಮಕ್ಕಳನ್ನು ಹೆಚ್ಚು ಮೃತ್ಯು ಬಾಧಿಸುತ್ತದೆ ಎಂಬ ವರದಿಗಳ ಹಿನ್ನೆಲೆಯಲ್ಲಿ ಅಂಗನವಾಡಿ ವ್ಯಾಪ್ತಿಯ ಎಲ್ಲಾ ಮಕ್ಕಳಲ್ಲಿ ಪೌಷ್ಠಿಕಾಂಶವನ್ನು ಸುಧಾರಣೆ ಮಾಡುವ ನಿಟ್ಟಿನಲ್ಲಿ ಕ್ರಮವಹಿಸುವಂತೆ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಉಪನಿರ್ದೇಶಕರುಗಳಿಗೆ ನಿರ್ದೇಶನ ನೀಡಲಾಗಿದೆ.

- ಎಲ್ಲಾ ಜಿಲ್ಲೆಗಳಲ್ಲಿ ಪೌಷ್ಠಿಕ ಆಹಾರ ಪುನಶ್ಚೇತನ ಕೇಂದ್ರ ಗಳನ್ನು (Nutritional Rehabilitation Centres) ತೆರೆಯುವಂತೆ ಆರೋಗ್ಯ ಇಲಾಖೆಗೆ ನಿರ್ದೇಶನ ನೀಡಲಾಗಿದೆ.

- ತೀವ್ರ ಅಪೌಷ್ಠಿಕ ಮಕ್ಕಳು ಕಂಡುಬಂದಲ್ಲಿ ಈ ಎನ್.ಆರ್.ಸಿ. ಗಳಿಗೆ ದಾಖಲು ಮಾಡಿ ಪೌಷ್ಠಿಕತಾ ಮಟ್ಟವನ್ನು ಸುಧಾರಿಸಲು ಕ್ರಮ ವಹಿಸುವಂತೆ ತಿಳಿಸಲಾಗಿದೆ.

- ರಾಜ್ಯದಲ್ಲಿ ಒಟ್ಟು 32 ಪೌಷ್ಠಿಕ ಆಹಾರ ಪುನಶ್ಚೇತನ ಕೇಂದ್ರಗಳು (Nutritional Rehabilitation Centres) ಕಾರ್ಯನಿರ್ವಹಿಸುತ್ತಿದ್ದು, ಇವುಗಳಲ್ಲಿ ಜುಲೈ 2021ರ ಮಾಹೆಯ ವರೆಗೆ ಒಟ್ಟು 560 ಅಪೌಷ್ಠಿಕ ಮಕ್ಕಳನ್ನು ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ.

- ಮಹಿಳೆಯರ ಹಾಗೂ ಮಕ್ಕಳ ವೈದ್ಯಕೀಯ ತಪಾಸಣೆ, ಆರೈಕೆ ಹಾಗೂ ಸಾರ್ವತ್ರಿಕ ಲಸಿಕಾ ಸೇವೆಗಳನ್ನು ಸಮರ್ಪಕವಾಗಿ ಒದಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಶಿಕ್ಷಣ ಇಲಾಖೆಗಳ ವತಿಯಿಂದ ಸುತ್ತೋಲೆ ಹೊರಡಿಸಲಾಗಿರುತ್ತದೆ ಎಂದು ಹೇಳಿದರು.

ಪತ್ರಿಕಾ ಗೋಷ್ಠಿಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಕಾರ್ಯದರ್ಶಿಗಳಾದ ಪಂಕಜ್ಕುಮಾರ್ ಪಾಂಡೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

## ಗುಣಮಟ್ಟವಲ್ಲದ ಔಷಧಿಗಳ ಬಳಕೆ ನಿಷೇಧ

ಬೆಂಗಳೂರು ಆಗಸ್ಟ್ 23 (ಕರ್ನಾಟಕ ವಾರ್ತೆ) :

ಕರ್ನಾಟಕ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು, ಯುನೋ –ಡಿ (ಪ್ಯಾಂಟೋಪ್ರಜೋಲ್ ಅಂಡ್ ಡೋಮಪೆರಿಡನ್ ಟ್ಯಾಬ್ಲೆಟ್ಸ್), ಅಮ್ಲೋಟ್ –ಎಟಿ (ಅಮ್ಲೋಡಿಪೈನ್ ಅಂಡ್ ಅಟೆನೊಲೊಲ್ ಟ್ಯಾಬ್ಲೆಟ್ಸ್), ಓಲ್ಫಿಟ್–ಓಜಡ್ (ಓಪ್ಲಾಕ್ಸಸಿನ್ & ಓರ್‌ನಿಡಜೋಲ್ ಟ್ಯಾಬ್ಲೆಟ್ಸ್

ಐಪಿ), ಫೋರ್ಪಿ–40 (ಪ್ಯಾಂಟೋಪ್ರಜೋಲ್ ಗ್ಯಾಸ್ಟ್ರೋ–ರಿಸಿಸ್ಟೆಂಟ್ ಟ್ಯಾಬ್ಲೆಟ್ಸ್ ಐಪಿ), ಆರ್‌ಎಕ್ಸ್ ಕೋಲ್ಡ್–ಡಿ ಟ್ಯಾಬ್ಲೆಟ್ಸ್ (ಪ್ಯಾರಸೆಟಮೋಲ್, ಡಿಫೈನ್‌ಹೈಡ್ರಾಮಿನ್ ಹೆಚ್‌ಸಿಎಲ್, ಪೆನ್ಯೆಲ್‌ಫೇರಿನ್ & ಕೆಫೀನ್ ಟ್ಯಾಬ್ಲೆಟ್ಸ್), ಕಾಲ್‌ಬ್ಲೆಂಡ್ ಹೆಚ್‌ಡಿ (ಕ್ಯಾಲ್ಷಿಂ & ವಿಟಮಿನ್ ಡಿ3 ಟ್ಯಾಬ್ಲೆಟ್ಸ್ ಐಪಿ), ಪೆರಾಹೆಕ್ಸ್–650 ಟ್ಯಾಬ್ಲೆಟ್ಸ್ (ಪ್ಯಾರಾಸೆಟಮೋಲ್ ಟ್ಯಾಬ್ಲೆಟ್ಸ್ ಐ.ಪಿ), ಮೆಲೊಕ್ಸಿಕಮ್ ಇಂಜೆಕ್ಷನ್ (ಮೆಲೊಡ್–ವೆಟ್) ಈ ಔಷದಿಗಳನ್ನು/ಕಾಂತಿವರ್ಧಕ ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ ಮತ್ತು ನರ್ಸಿಂಗ್ ಹೋಮ್‌ನವರು ದಾಸ್ತಾನು ಮಾಡುವುದಾಗಲೀ, ಮಾರಾಟ ಮಾಡುವುದಾಗಲೀ ಅಥವಾ ಉಪಯೋಗಿಸುವುದಾಗಲೀ ಮಾಡಬಾರದು ಹಾಗೂ ಯಾರಾದರೂ ಈ ಔಷಧಿಗಳ ದಾಸ್ತಾನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕ್ಷೇತ್ರದ ಔಷಧ ಪರಿವೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರ ಗಮನಕ್ಕೆ ತರಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಐದು ವರ್ಷದ ಇಂಟೆಗ್ರೇಟೆಡ್ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಬೆಂಗಳೂರು ಆಗಸ್ಟ್ 23 (ಕರ್ನಾಟಕ ವಾರ್ತೆ) :

ಬೆಂಗಳೂರು ವಿಶ್ವವಿದ್ಯಾಲಯವು 2021–22ನೇ ಸಾಲಿಗೆ ಆರಂಭಿಸಿರುವ ಐದು ವರ್ಷದ ಇಂಟೆಗ್ರೇಟೆಡ್ ಕೋರ್ಸ್‌ಗೆ ದ್ವಿತೀಯ ಪಿಯುಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಪ್ರತಿಶತ 50% ರಷ್ಟು ಅಂಕಗಳಿಸಿದ ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಹಾಗೂ ಪ್ರತಿಶತ 45% ರಷ್ಟು ಅಂಕಗಳಿಸಿದ ಪ.ಜಾ./ಪ.ಪಂ/ಪ್ರವರ್ಗ–1ರ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅಭ್ಯರ್ಥಿಗಳ ಆಯ್ಕೆಯ ಪ್ರಕ್ರಿಯೆಯನ್ನು ಅವರುಗಳಿಸಿದ ಅಂಕಗಳ ಜೇಷ್ಠತಾ ಆಧಾರದ ಮೇಲೆ ನಿರ್ಧರಿಸಲಾಗುವುದು.

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು **ಆಗಸ್ಟ್ 31** ಕೊನೆಯ ದಿನಾಂಕವಾಗಿದೆ. ಸಾಮಾನ್ಯ ಮತ್ತು ಪೇಮೆಂಟ್ ಸೀಟು ಎರಡಕ್ಕೂ

**ಆಗಸ್ಟ್ 31** ರೊಳಗೆ ಅರ್ಜಿ ಸಲ್ಲಿಸುವವರು ಸಾಮಾನ್ಯ ವರ್ಗಕ್ಕೆ ಶುಲ್ಕ ರೂ.400/– ಪ.ಜಾ/ಪ.ಪಂ/ ಪ್ರವರ್ಗ–1ಕ್ಕೆ ಶುಲ್ಕ ರೂ–200/– ಹಾಗೂ ಸಾಮಾನ್ಯ ಮತ್ತು ಪೇಮೆಂಟ್ ಸೀಟು ಎರಡಕ್ಕೂ ಸೆಪ್ಟೆಂಬರ್ 1 ರಿಂದ ಸೆಪ್ಟೆಂಬರ್ 6 ರೊಳಗೆ ಅರ್ಜಿ ಸಲ್ಲಿಸುವವರು ರೂ.100/– ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಬಹುದು. ಸಾಮಾನ್ಯ ವರ್ಗಕ್ಕೆ ರೂ.500/–, ಪ.ಜಾ/ಪ.ಪಂ/ ಪ್ರವರ್ಗ–1 ಕ್ಕೆ ರೂ.300/– ನಿಗಧಿಪಡಿಸಲಾಗಿದೆ. ಜೇಷ್ಠತಾ ಪಟ್ಟಿ ಮತ್ತು ಪ್ರವೇಶ ಪ್ರಕ್ರಿಯೆಯನ್ನು ಶ್ರೀಘದಲ್ಲೇ ಘೋಷಿಸಲಾಗುವುದು.

ಭರ್ತಿ ಮಾಡಿದ ಅರ್ಜಿಯೊಂದಿಗೆ ಇತರೆ ದಾಖಲಾತಿಗಳೊಂದಿಗೆ ಮುಖ್ಯಸ್ಥರು, ಜೀವವಿಜ್ಞಾನ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು–560056. ಇವರಿಗೆ ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ: 22961521/1923/ 8722048456 ರವರನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು

**ದಿನಾಂಕ: 23.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 43 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | * | * | * |

| | | | | |
|---|---|---|---|---|
| 3 | ಕವಿಕ, ಮೈಸೂರುರಸ್ತೆ | * | * | * |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 42 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 53 | ತೃಪ್ತಿಕರ | $NO_2$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 67 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 57 | ತೃಪ್ತಿಕರ | $PM_{10}$ |
| **(23.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 51 | ತೃಪ್ತಿಕರ | $PM_{10}$ |
| 9 | ಪೀಣ್ಯ | 48 | ಉತ್ತಮ | $PM_{10}$ |
| 10 | ಬಿಟಿಎಂ ಲೇಔಟ್ | 69 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 23.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 43 | Good | $PM_{10}$ |
| 2 | Jayanagar 5th Block, Shalini ground | * | * | * |
| 3 | KAVIKA, Mysore Road | * | * | * |

| | | | | |
|---|---|---|---|---|
| 4 | Rajeev Gandhi Institute of Chest Disease, NIMHANS, Hombegowda Nagar | 42 | Good | $PM_{10}$ |
| 5 | HSR Layout, near Central Silkboard | 53 | Satisfactory | $NO_2$ |
| 6 | City Railway Station, Magestic, Bengaluru | 67 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 57 | Satisfactory | $PM_{10}$ |
| **(23.8.2021 at 11.05 AM)** | | | | |
| 8 | BWSSB, Kadabesanahalli | 51 | Satisfactory | $PM_{10}$ |
| 9 | Peenya | 48 | Good | $PM_{10}$ |
| 10 | BTM Layout | 69 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |